# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | **ಶ್ರೀ ಬಸನಗೌಡ ಬಾದರ್ಲಿ(ವಿಧಾನಸಭೆಯಿಂದ ಚುನಾಯಿತರಾದವರು)** |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1016** |
| ಉತ್ತರಿಸಬೇಕಾದ ದಿನಾಂಕ | : | 20.08.2025 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿಗೆ ವಸತಿ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ವಿತರಿಸಲಾಗಿದೆ; | 2023-24 ರಿಂದ 2025-26ನೇ ಸಾಲಿಗೆ ರಾಜ್ಯ ಸರ್ಕಾರದ ವಸತಿ ಯೋಜನೆಗಳಡಿ ಆಯವ್ಯಯದಲ್ಲಿ ಯಾವುದೇ ಹೊಸ ಮನೆಗಳ ಗುರಿಯನ್ನು ನಿಗಧಿಪಡಿಸಿರುವುದಿಲ್ಲ.<br><br>2024-25ನೇ ಸಾಲಿಗೆ ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಧಾನ ಮಂತ್ರಿ ಅವಾಸ್(ಗ್ರಾಮೀಣ) ಯೋಜನೆಯಡಿ ರಾಜ್ಯಕ್ಕೆ 7,02,731 ಮನೆಗಳ ಗುರಿಯನ್ನು ಹಂಚಿಕೆ ಮಾಡಲಾಗಿದ್ದು, ಈ ಪೈಕಿ ಸಿಂಧನೂರು ತಾಲ್ಲೂಕಿಗೆ 7,751 ಮನೆಗಳ ಗುರಿಯನ್ನು ಹಂಚಿಕೆ ಮಾಡಲಾಗಿರುತ್ತದೆ. |
| ಆ) | 2025-26ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ನಿವೇಶನಗಳನ್ನು ನೀಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಈ ಬಗ್ಗೆ ಮಂಜೂರಾತಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದಲ್ಲಿ ಎಷ್ಟು ನಿವೇಶನಗಳ ಮಂಜೂರಾತಿ ಕೋರಲಾಗಿದೆ; ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ; | ಅನೇಕ ಅರ್ಹ ವಸತಿರಹಿತ ಕುಟುಂಬಗಳು ಸ್ವಂತ ನಿವೇಶನ ಹೊಂದಿಲ್ಲದ ಕಾರಣ ವಸತಿ ಸೌಕರ್ಯದಿಂದ ವಂಚಿತರಾಗುತ್ತಿರುವುದನ್ನು ಮನಗಂಡು ರಾಜ್ಯ ಸರ್ಕಾರದಿಂದ ಮುಖ್ಯಮಂತ್ರಿಗಳ ಗ್ರಾಮೀಣ ಹಾಗೂ ಮುಖ್ಯಮಂತ್ರಿಗಳ ನಗರ ನಿವೇಶನ ಯೋಜನೆಗಳನ್ನು ಜಾರಿಗೊಳಿಸಲಾಗಿದೆ.<br><br>ಈ ಯೋಜನೆಗಳಡಿ ಅರ್ಹ ಕುಟುಂಬಳಿಗೆ ನಿವೇಶನ ಹಂಚಿಕೆ ಮಾಡಲು ಸ್ಥಳೀಯವಾಗಿ ಲಭ್ಯವಿರುವ ಸರ್ಕಾರಿ ಜಮೀನನ್ನು ಜಿಲ್ಲಾಧಿಕಾರಿಗಳಿಂದ ಮಂಜೂರು ಮಾಡಿಸಿಕೊಂಡು ಬಳಸಿಕೊಳ್ಳಬಹುದಾಗಿದೆ. ಸರ್ಕಾರಿ ಜಮೀನು ಲಭ್ಯವಿಲ್ಲದ ಕಡೆಗಳಲ್ಲಿ ಮಾತ್ರ ವಸತಿಗೆ ಸೂಕ್ತ ಖಾಸಗಿ ಜಮೀನು ಖರೀದಿಸಲು ಜಿಲ್ಲಾ ಜಮೀನು ಖರೀದಿ ಸಮಿತಿ ಮೂಲಕ ಕ್ರಮವಹಿಸಲಾಗುತ್ತಿದೆ.<br><br>ಜಮೀನಿನ ಲಭ್ಯತೆ ಹಾಗೂ ನಿವೇಶನರಹಿತರ ಸಂಖ್ಯೆಗೆ ಅನುಗುಣವಾಗಿ ನಿವೇಶನ ವಿತರಿಸಲು ಕ್ರಮವಹಿಸಲಾಗುತ್ತಿದ್ದು, ನಿವೇಶನ ಹಂಚಿಕೆಗೆ ಯಾವುದೇ ಕನಿಷ್ಠ ಅಥವಾ ಗರಿಷ್ಠ ಗುರಿ ನಿಗದಿಪಡಿಸಿರುವುದಿಲ್ಲ ಹಾಗೂ ಯಾವುದೇ ಕಾಲಮಿತಿ ಇರುವುದಿಲ್ಲ. ಆಯವ್ಯಯದಲ್ಲಿ ನಿಗಧಿಪಡಿಸಬಹುದಾದ ಅನುದಾನಕ್ಕೆ ಅನುಗುಣವಾಗಿ ಹಂತ-ಹಂತವಾಗಿ ನಿವೇಶನರಹಿತರಿಗೆ ನಿವೇಶನ ಒದಗಿಸಿ ವಸತಿ ಸೌಕರ್ಯ ಕಲ್ಪಿಸಲಾಗುವುದು. |
| ಇ) | ಸಿಂಧನೂರು ತಾಲ್ಲೂಕಿಗೆ ವಸತಿ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು) | ಕಳೆದ 3 ವರ್ಷಗಳಿಂದ ಸಿಂಧನೂರು ತಾಲ್ಲೂಕಿಗೆ ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಧಾನ ಮಂತ್ರಿ ಅವಾಸ್ (ಗ್ರಾಮೀಣ) ಯೋಜನೆಯಡಿ ಭೌತಿಕ ಪ್ರಗತಿಗನುಗುಣವಾಗಿ ರೂ.418.80ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |

ಸಂಖ್ಯೆ: ವಇ 379 ಹೆಚ್‌ಎಎಂ 2025

**(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು